ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1608
ವಿಧಾನ ಪರಿಷತ್ ಸದಸ್ಯರ ಹೆಸರು	:	ಡಾ:ಚಂದ್ರಶೇಖರ್ ಬಿ.ಪಾಟೀಲ್
ಉತ್ತರಿಸಬೇಕಾದ ದಿನಾಂಕ	:	20.03.2020
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೆ.ಪಿ.ಎಸ್.ಸಿ. ಯಿಂದ ನೇಮಕಗೊಂಡ ಮಹಿಳಾ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯಲ್ಲಿ ಗೊಂದಲಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ
ಆ)	ಬಂದಿದ್ದಲ್ಲಿ, ಗೊಂದಲಗಳನ್ನು ಸರಿಪಡಿಸಲು ಕೈಗೊಂಡ ಕ್ರಮಗಳೇನು?	2019ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ 628 ಅಭ್ಯರ್ಥಿಗಳು ಮೇಲ್ವಿಚಾರಕಿ ಹುದ್ದೆಗೆ ಆಯ್ಕೆಗೊಂಡಿದ್ದು, ಈ ಪೈಕಿ 519 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ಹೊರಡಿಸಲಾಗಿತ್ತು. ಈ ರೀತಿ ನೇಮಕಗೊಂಡ ಅಭ್ಯರ್ಥಿಗಳಿಗೆ ದಿನಾಂಕ:24.01.2020ರಂದು ಸ್ಥಳ ನಿಯುಕ್ತಿ ಆದೇಶ ಹೊರಡಿಸಲಾಗಿತ್ತು. ಸದರಿ ಸ್ಥಳ ನಿಯುಕ್ತಿ ಆದೇಶದಲ್ಲಿ **Non-HKP** ಮತ್ತು **HKP** ಅಭ್ಯರ್ಥಿಗಳಿಗೆ 371(ಜೆ)ರಡಿ ಹೈದ್ರಾಬಾದ್ ಕರ್ನಾಟಕ ಮೀಸಲಾತಿ ಜಿಲ್ಲೆಗಳ ಅಭ್ಯರ್ಥಿಗಳಿಗೆ ಸ್ಥಳ ಹಂಚಿಕೆಗೊಳಿಸುವಲ್ಲಿ ವ್ಯತ್ಯಾಸವಾಗಿರುತ್ತದೆ. ಈ ರೀತಿ ಉಂಟಾಗಿರುವ ವ್ಯತ್ಯಾಸವನ್ನು ಸರಿಪಡಿಸಲು ಮಾನ್ಯ ಮುಖ್ಯಮಂತ್ರಿಯವರ ನಿರ್ದೇಶನದಂತೆ ಈಗಾಗಲೇ ಸ್ಥಳ ನಿಯುಕ್ತಿಗೊಂಡಿರುವ ಅಭ್ಯರ್ಥಿಗಳು ಸ್ಥಳ ನಿಯುಕ್ತಿಗೊಂಡ ಸ್ಥಳದಲ್ಲಿಯೇ ಮುಂದುವರೆಯಲು ಇಚ್ಛಿಸಿದಲ್ಲಿ ಅಂತಹವರನ್ನು ಹೊರತುಪಡಿಸಿ, ಉಳಿದ ಅಭ್ಯರ್ಥಿಗಳಿಗೆ ದಿನಾಂಕ:12.02.2020ರಂದು ಸಮಾಲೋಚನೆ ಮುಖಾಂತರ (ಕೌನ್ಸಿಲಿಂಗ್) ಸ್ಥಳ ನಿಯುಕ್ತಿಗೊಳಿಸಿ ದಿನಾಂಕ:13.02.2020ರಂದು ಆದೇಶ ಹೊರಡಿಸಲಾಗಿದೆ.

ಇ)	ಸದರಿ ಸ್ಥಳ ನಿಯುಕ್ತಿಗಳು ನಿಯಮಗಳ ಪ್ರಕಾರ ನಡೆದಿದೆಯೇ; ಯಾವ ರೀತಿಯಲ್ಲಿ ಸ್ಥಳ ನಿಯುಕ್ತಿಗಳನ್ನು ಮಾಡಲಾಗಿದೆ (ವಿವರ ನೀಡುವುದು)	ಹೌದು, ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲಾಗಿದೆ. ಹೊಸದಾಗಿ ಮೇಲ್ವಿಚಾರಕಿಯರ ನೇಮಕಗೊಂಡ 519 ಅಭ್ಯರ್ಥಿಗಳ ಪೈಕಿ ಕೆಲವು ಅಭ್ಯರ್ಥಿಗಳು ದಿನಾಂಕ:24.01.2020ರ ಸ್ಥಳ ನಿಯುಕ್ತಿ ಆದೇಶದಂತೆ ಅದೇ ಸ್ಥಳದಲ್ಲಿ ಮುಂದುವರೆಯಲು ಇಚ್ಛೆಯುಳ್ಳವರನ್ನು ಹೊರತುಪಡಿಸಿ, ಉಳಿದ ಅಭ್ಯರ್ಥಿಗಳಿಗೆ ಏಕಕಾಲದಲ್ಲಿ ದಿನಾಂಕ:12.02.2020ರಂದು ಕೌನ್ಸಿಲಿಂಗ್ ಮುಖಾಂತರ ದಿನಾಂಕ:13.02.2020ರಂದು ಸ್ಥಳ ನಿಯುಕ್ತಿಗೊಳಿಸಿ ಆದೇಶ ಹೊರಡಿಸಲಾಗಿದೆ.
ಈ)	ಎಲ್ಲಾ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಯನ್ನು ಕೌನ್ಸಿಲಿಂಗ್ ಮುಖಾಂತರ ಏಕ ಕಾಲದಲ್ಲಿ ಮಾಡಲಾಗಿದೆಯೇ;	ಹೌದು
ಉ)	ಕೌನ್ಸಿಲಿಂಗ್‌ಗೆ ಹಾಜರಾಗಲು ಎಲ್ಲಾ ಅಭ್ಯರ್ಥಿಗಳಿಗೆ ಸಾಕಷ್ಟು ಸಮಯಾವಕಾಶ ನೀಡಲಾಗಿತ್ತೇ? ಸಮಯಾವಕಾಶ ನೀಡಲಾಗಿದ್ದಲ್ಲಿ ಎಷ್ಟು ಸಮಯಾವಕಾಶ ನೀಡಲಾಗಿತ್ತು (ವಿವರ ನೀಡುವುದು)	ಸೂಕ್ತ ಸಮಯಾವಕಾಶ ನೀಡಲಾಗಿದೆ. ಕೌನ್ಸಿಲಿಂಗ್‌ನಲ್ಲಿ ಹಾಜರಾಗಲು ಎಲ್ಲಾ ಅಭ್ಯರ್ಥಿಗಳಿಗೆ ದಿನಾಂಕ:10.02.2020ರಂದು ಉಪ ನಿರ್ದೇಶಕರುಗಳ ಮೂಲಕ ದಿನಾಂಕ:12.02.2020ರಂದು ನಡೆಯುವ ಕೌನ್ಸಿಲಿಂಗ್‌ಗೆ ಹಾಜರಾಗುವಂತೆ ಇ-ಮೇಲ್ ಮೂಲಕ ಮತ್ತು ವಾಟ್ಸ್‌ಆಪ್ ಹಾಗೂ ದೂರವಾಣಿ ಮೂಲಕ ತಿಳಿಸಲಾಗಿತ್ತು.
ಊ)	ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಅನುಸರಿಸುವ ಮಾನದಂಡಗಳು ಮತ್ತು ನೀತಿ ನಿಯಮಗಳು ಏನಾದರೂ ಇವೆಯೇ; ಇದ್ದಲ್ಲಿ, ಅವುಗಳ ಪ್ರತಿ ಒದಗಿಸುವುದು;	ದಿನಾಂಕ:12.02.2020ರಂದು ನಡೆದ ಕೌನ್ಸಿಲಿಂಗ್‌ಗೆ ಹಾಜರಾದ ಮೇಲ್ವಿಚಾರಕಿಯರಿಗೆ ಸ್ಥಳ ಆಯ್ಕೆ ಸಂಬಂಧ ಪ್ರೊಜೆಕ್ಟರ್ ಮೂಲಕ ದೊಡ್ಡ ಪರದೆಯಲ್ಲಿ ಖಾಲಿ ಹುದ್ದೆಗಳನ್ನು ಪ್ರದರ್ಶಿಸಲಾಗಿತ್ತು. ಅಭ್ಯರ್ಥಿಗಳ ಅಭಿಮತದೊಂದಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.
ಋ)	ಕೌನ್ಸಿಲಿಂಗ್ ಮಾಡುವ ಮೊದಲು ಖಾಲಿ ಹುದ್ದೆಗಳ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ; ಪ್ರಕಟಿಸಿದ್ದಲ್ಲಿ ಯಾವಾಗ ಪ್ರಕಟಿಸಲಾಗಿತ್ತು;	ಹೌದು. ಖಾಲಿ ಹುದ್ದೆಗಳ ಮಾಹಿತಿಯನ್ನು ಕೌನ್ಸಿಲಿಂಗ್ ಸ್ಥಳದ ಹೊರಗಡೆ ಪ್ರಕಟಿಸಲಾಗಿತ್ತು ಹಾಗೂ ಅಭ್ಯರ್ಥಿಗಳಿಗೆ ಪವರ್ ಪಾಯಿಂಟ್ ಮೂಲಕ ದೊಡ್ಡ ಪರದೆಯಲ್ಲಿಯೂ ಸಹ ಖಾಲಿ ಹುದ್ದೆಗಳ ಮಾಹಿತಿಯನ್ನು ಪ್ರದರ್ಶಿಸಲಾಗಿತ್ತು.

ಋ)	ಆಗಿರುವ ಗೊಂದಲವನ್ನು ಮತ್ತು ಅನ್ಯಾಯವನ್ನು ಸರಿಪಡಿಸಲು ಇನ್ನೊಮ್ಮೆ ಎಲ್ಲಾ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ; ಈ ಕುರಿತು ಸರ್ಕಾರದ ನಿಲುವು ಏನು;	ಇಲ್ಲ ಮಾನ್ಯ ಮುಖ್ಯಮಂತ್ರಿಗಳ ಆದೇಶದಂತೆ ಬದಲಾವಣೆ ಕೋರಿದವರಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿರುವುದರಿಂದ ಮತ್ತೊಮ್ಮೆ ಕೌನ್ಸಿಲಿಂಗ್ ಮಾಡುವ ಪ್ರಮೇಯ ಉದ್ಭವಿಸುವುದಿಲ್ಲ.

ಸಂಖ್ಯೆ: ಮಮಇ 107 ಎಸ್‌ಜೆಡಿ 2020

(ಶಶಿಕಲಾ ಅ.ಜೊಲ್ಲೆ)
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.